# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 643 |
| ಮಾನ್ಯ ಸದಸ್ಯರ ಹೆಸರು | ಶ್ರೀಮತಿ ಹೇಮಲತಾ ನಾಯಕ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13.12.2024 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಹೆಚ್ಚಿನ ಸಂಖ್ಯೆಯಲ್ಲಿ ರಾಯಚೂರು ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವುದರಿಂದ ಸದರಿ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ವಸತಿ ನಿಲಯಗಳು ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ವಸತಿ ನಿಲಯಗಳನ್ನು ಮಂಜೂರು ಮಾಡಲು ಸರ್ಕಾರಕ್ಕೆ ಇರುವ ತೊಂದರೆ ಏನು; (ವಿವರ ನೀಡುವುದು) | ರಾಯಚೂರು ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 37 ಮೆಟ್ರಿಕ್-ಪೂರ್ವ ಹಾಗೂ 35 ಮೆಟ್ರಿಕ್-ನಂತರದ ಹೀಗೆ ಒಟ್ಟು 72 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಇವುಗಳಲ್ಲಿ 2090 ಮೆಟ್ರಿಕ್-ಪೂರ್ವ ಮತ್ತು 4838 ಮೆಟ್ರಿಕ್-ನಂತರದ ಹೀಗೆ ಒಟ್ಟು 6928 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ.<br><br>ಮುಂದುವರೆದು, 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-178(1) ರ ಘೋಷಣೆಯಂತೆ ರಾಜ್ಯಾದ್ಯಂತ 100 ಸಂಖ್ಯಾಬಲದ 150 ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿದ್ದು, ಈ ಪೈಕಿ ರಾಯಚೂರು ಜಿಲ್ಲಾ ವ್ಯಾಪ್ತಿಗೆ 2 ಮೆಟ್ರಿಕ್-ನಂತರದ ಬಾಲಕರು ಹಾಗೂ 2 ಮೆಟ್ರಿಕ್-ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿರುತ್ತದೆ. |
| ಆ) | ರಾಯಚೂರು ವಿಶ್ವವಿದ್ಯಾಲಯ, ಯರಗೇರಾ, ಇಲ್ಲಿ ಹಿಂದುಳಿದ ವರ್ಗಗಳ ವಸತಿ ನಿಲಯ ಮಂಜೂರು ಮಾಡಲು ಪ್ರಸ್ತಾವನೆ ಬಂದಿದೆಯೇ ; ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆ ಯಾವ ಹಂತದಲ್ಲಿ ಇದೆ ; ಯಾವಾಗ ಮಂಜೂರು ಮಾಡಲಾಗುವುದು ? (ವಿವರ ನೀಡುವುದು) | ಪ್ರಸ್ತಾವನೆ ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ. |

**ಸಂಖ್ಯೆ:ಹಿಂವಕ 960 ಬಿಎಂಎಸ್ 2024**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.